# ಕರ್ನಾಟಕ ಸರ್ಕಾರದ ನಡವಳಿಗಳು

## ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

**ವಿಷಯ:** ಬೆಂಗಳೂರು ನಗರದ ಸಂಸ್ಕರಿಸಿದ ಕೊಳಚೆ ನೀರನ್ನು ಕೋಲಾರ ಜಿಲ್ಲೆಯ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಒಟ್ಟು 126 ಕೆರೆಗಳಿಗೆ ತುಂಬಿಸುವ ಏತ ನೀರಾವರಿ ಯೋಜನೆ ಕಾಮಗಾರಿಯ ಟೆಂಡರ್ ಅಂಗೀಕರಿಸುವ ಬಗ್ಗೆ.

*****

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸನೀಇ 44 ಏನೀಯೋ 2015 (ತಾಂತ್ರಿಕ), ದಿನಾಂಕ: 20.10.2015.
2. ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ ಬೆಂಗಳೂರುರವರ ಪತ್ರದ ಸಂಖ್ಯೆ: ಮುಸದ/ತಾಂ.ಸ-6/ಸ.ಇಂ.-16/ ಕೆಸಿವ್ಯಾಲಿ/2016/1402, ದಿನಾಂಕ: 16.05.2016.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಬೆಂಗಳೂರು ನಗರದ ಸಂಸ್ಕರಿಸಿದ ಕೊಳಚೆ ನೀರನ್ನು ಕೋಲಾರ ಜಿಲ್ಲೆಯ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಒಟ್ಟು 126 ಕೆರೆಗಳಿಗೆ ತುಂಬಿಸುವ ಏತ ನೀರಾವರಿ ಯೋಜನೆ ಕಾಮಗಾರಿಯ ರೂ.1280,00.00ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ, ಬೆಂಗಳೂರು ಇವರು ಅಂದಾಜಿಗೆ ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಕೋಲಾರ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಪೂರ್ವ ಅರ್ಹತೆ ಟೆಂಡರ್ ಪ್ರಕಟಣೆಯನ್ನು ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

| | ಮೂಲ ಪ್ರಕಟಣೆ | ಮುಂದೂಡಿಕೆ ಪ್ರಕಟಣೆ-1 | ಮುಂದೂಡಿಕೆ ಪ್ರಕಟಣೆ-2 |
|---|---|---|---|
| ಇಂಡಿಯನ್ ಟ್ರೇಡ್ ಜನರಲ್ | - | 27.01.2016 | |
| ರಾಜ್ಯ ಟೆಂಡರ್ ಬುಲೆಟಿನ್ | 24.11.2015 | 08.01.2016 | 05.03.2016 |
| ಜಿಲ್ಲಾ ಟೆಂಡರ್ ಬುಲೆಟಿನ್ | 30.11.2015 | 11.01.2016 | 08.03.2016 |
| ಡೆಕ್ಕನ್ ಹೆರಾಲ್ಡ್ ದಿನ ಪತ್ರಿಕೆ | 25.11.2015 | 09.01.2016 | 04.03.2016 |
| ಪ್ರಜಾವಾಣಿ ದಿನ ಪತ್ರಿಕೆ | 25.11.2015 | 09.01.2016 | 04.03.2016 |

ಇಬ್ಬರು ಗುತ್ತಿಗೆದಾರರಾದ ಮೆ: ಮೇಘಾ ಇಂಜಿನಿಯರಿಂಗ್ & ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್ ಮತ್ತು ಮೆ: ಎನ್.ಸಿ.ಸಿ ಲಿಮಿಟೆಡ್ ಇವರ ಪೂರ್ವಾರ್ಹತಾ ಬಿಡ್‌ಗಳನ್ನು ದಿನಾಂಕ 18.04.2016ರಂದು ನಡೆದ ಟೆಂಡರ್ ಪರಿಶೀಲನಾ ಸಭೆಯಲ್ಲಿ ಮಂಡಿಸಿ ಅನುಮೋದಿಸಿದ್ದು, ಇವರ ಆರ್ಥಿಕ ಬಿಡ್‌ಗಳನ್ನು ದಿನಾಂಕ 04.05.2016ರಂದು ತೆರೆಯಲಾಗಿರುತ್ತದೆ. ನಂತರ ಆರ್ಥಿಕ ಬಿಡ್ ಅನ್ನು ದಿ:12.05.2016ರಂದು ನಡೆದ ಟೆಂಡರ್ ಪರಿಶೀಲನಾ ಸಭೆಯಲ್ಲಿ ಮಂಡಿಸಿ ಅವರ ಶಿಫಾರಸ್ಸಿನಂತೆ ಇವರಿಬ್ಬರ ಆರ್ಥಿಕ ಬಿಡ್ ಅರ್ಹತೆ ಹೊಂದಿದ್ದು, ವಿವರಗಳು ಕೆಳಕಂಡಂತಿವೆ.

| ಟೆಂಡರಿಗೆ ಇಡಲಾದ ಮೊತ್ತ | | | ರೂ 1220,00,00,000/- |
|---|---|---|---|
| ಕ್ರಮ ಸಂ. | ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್ | ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ Lumpsum ಮೊತ್ತ | ಶೇಕಡಾವಾರು ಹೆಚ್ಚಳ/ಕಡಿಮೆ |
| 1 | ಶ್ರೀ. ಸಿ.ಹೆಚ್. ಪೆದ್ದಸುಬ್ಬಯ್ಯ (ಮೆ: ಮೇಘಾ ಇಂಜಿನಿಯರಿಂಗ್ & ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್), [illegible] | 1488,40,00,000/- | 22.00 ಹೆಚ್ಚು |
| 2. | [illegible] (ಮೆ: ಎನ್.ಸಿ.ಸಿ. ಲಿಮಿಟೆಡ್), | 1561,60,00,000/- | 28.00 ಹೆಚ್ಚು |

| ಒಳ ಸಂಖ್ಯೆ | ಅಧೀಕ್ಷಕರು | ದಫ್ತರ್‌ದಾರ್ | ಶಾಂ.ಸ. |
|---|---|---|---|
| ದಿನಾಂಕ | | | |
| 1218 | | | |

13

ಮೇಲ್ಕಂಡಂತೆ ಶ್ರೀ ಸಿ.ಹೆಚ್.ಪೆದ್ದಸುಬ್ಬಯ್ಯ, (ಮೇ: ಮೇಘಾ ಇಂಜಿನಿಯರಿಂಗ್ & ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್), ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಕನಿಷ್ಠ ದರಗಳನ್ನು ನಮೂದಿಸಿರುವ ಗುತ್ತಿಗೆದಾರರಾಗಿದ್ದು ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 22.00ರಷ್ಟು ಹೆಚ್ಚಾಗಿರುತ್ತದೆ. ಸದರಿ ಟೆಂಡರನ್ನು ಸರ್ಕಾರದಲ್ಲಿ ಪರಿಶೀಲಿಸಿ ಪರಿಷ್ಕೃತ ದರಗಳ ಮೇಲೆ ಶೇ.10.00ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 1342,00,00,000/- ಗಳಿಗೆ ಟೆಂಡರನ್ನು ಅನುಮೋದಿಸಲು ಪರಿಗಣಿಸಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸನೀಇ 41 ಏನೀಯೋ 2016 (ತಾಂತ್ರಿಕ) (2),**
**ಬೆಂಗಳೂರು, ದಿನಾಂಕ: 28ನೇ ಮೇ 2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ನಗರದ ಸಂಸ್ಕರಿಸಿದ ಕೊಳಚೆ ನೀರನ್ನು ಕೋಲಾರ ಜಿಲ್ಲೆಯ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಒಟ್ಟು 126 ಕೆರೆಗಳಿಗೆ ತುಂಬಿಸುವ ಏತ ನೀರಾವರಿ ಯೋಜನೆ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಮೊತ್ತ ರೂ 1220,00,00,000/-ಗಳ ಮೇಲೆ ಶೇ.10.00ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ 1342,00,00,000/-ಗಳಿಗೆ (ರೂ ಒಂದು ಸಾವಿರದ ಮೂರು ನೂರ ನಲವತ್ತೆರೆಡು ಕೋಟಿ ರೂಪಾಯಿಗಳು ಮಾತ್ರ) ಶ್ರೀ ಸಿ.ಹೆಚ್.ಪೆದ್ದಸುಬ್ಬಯ್ಯ, (ಮೆ: ಮೇಘಾ ಇಂಜಿನಿಯರಿಂಗ್ & ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್), ಗುತ್ತಿಗೆದಾರರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಗುತ್ತಿಗೆ ಕರಾರು ಪತ್ರದಲ್ಲಿ ಶ್ರೀ ಸಿ.ಹೆಚ್.ಪೆದ್ದಸುಬ್ಬಯ್ಯ, (ಮೆ: ಮೇಘಾ ಇಂಜಿನಿಯರಿಂಗ್ & ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್) ಇವರ ಸಹಿಯನ್ನು ಪಡೆಯುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: FD 241 FC-1/16, ದಿನಾಂಕ: 23.05.2016ರನ್ವಯ ನೀಡಿರುವ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

28/5/2016

(ಬಿ.ಎಸ್.ಪಾಟೀಲ)
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲ ಸಂಪನ್ಮೂಲ ಇಲಾಖೆ(ಸಣ್ಣ ನೀರಾವರಿ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
4. ಮಹಾಲೇಖಪಾಲರು, ಲೆಕ್ಕಪತ್ರ-I ಮತ್ತು 2, ಕರ್ನಾಟಕ, ಬೆಂಗಳೂರು.
5. ಮಹಾಲೇಖಪಾಲರು, ಲೆಕ್ಕ ಪರಿಶೋಧನೆ I ಮತ್ತು 2, ಕರ್ನಾಟಕ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ದಕ್ಷಿಣ) ವಲಯ, ಬೆಂಗಳೂರು.
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಲೋಕೋಪಯೋಗಿ ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
8. ಅಧೀಕ್ಷಕ ಅಭಿಯಂತರರು, ಸಣ್ಣ ನೀರಾವರಿ ವೃತ್ತ, ಬೆಂಗಳೂರು.
9. ಕಾರ್ಯಪಾಲಕ ಅಭಿಯಂತರರು, ಸಣ್ಣ ನೀರಾವರಿ ವಿಭಾಗ, ಕೋಲಾರ.
10. ವಾರದ ರಾಜ್ಯಪತ್ರ. 9.ಶಾಖಾ ರಕ್ಷಿತ ಕಡತ. 10.ಹೆಚ್ಚುವರಿ ಪ್ರತಿಗಳು.